# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 471

ಸದಸ್ಯರ ಹೆಸರು : ಶ್ರೀ ಎನ್ ರವಿಕುಮಾರ್
ಉತ್ತರಿಸಬೇಕಾದ ದಿನಾಂಕ : 10.07.2023
ಉತ್ತರಿಸಬೇಕಾಗಿರುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಮೂಲ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | **ಬಂದಿದೆ.**<br><br>ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ ಆಯಾ ಆಸ್ಪತ್ರೆಗಳ ಅವಶ್ಯಕತೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಆದಾಗ್ಯೂ ದುರಸ್ತಿಗೊಳಪಡುವ ಆಸ್ಪತ್ರೆಗಳಲ್ಲಿ ಕೆಲವು ಮೂಲಭೂತ ಸೌಕರ್ಯಗಳ ದುರಸ್ತಿ ಕಾರ್ಯಗಳಿಗೆ ಆಗಿಂದಾಗ್ಗೆ ಕ್ರಮಕೈಗೊಳ್ಳಲಾಗುತ್ತಿದೆ.<br><br>ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ದಂತ ಆರೋಗ್ಯಾಧಿಕಾರಿಗಳ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿದೆ.<br><br>1. ಪತ್ರ ಸಂಖ್ಯೆ: ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ: 13.12.2022ರಲ್ಲಿ ರಾಜ್ಯದ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿಮಾಡಲು ಅನುಮತಿ ನೀಡಲಾಗಿದೆ.<br><br>2. ಇಲಾಖೆಯಲ್ಲಿ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ಸೇವಾನಿರತ ವೈದ್ಯರುಗಳನ್ನು ಖಾಲಿಯಿರುವ ಜಿಲ್ಲಾ ಆಸ್ಪತ್ರೆ/ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ನೇಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>3. ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ ತಜ್ಞ ವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಆ | ಬೆಂಗಳೂರಿನ ವಿಕ್ಟೋರಿಯಾ, ಬೋರಿಂಗ್, ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ, ಕೆ.ಸಿ ಜನರಲ್ ಆಸ್ಪತ್ರೆ, ಜಯನಗರ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು, ಮೂಲ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | ವೈದ್ಯಕೀಯ ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿರುವ ಈ ಕೆಳಕಂಡ 3 ಆಸ್ಪತ್ರೆಗಳಿಗೆ ಸಂಬಂಧಿಸಿದಂತೆ ನೀಡಿರುವ ಮಾಹಿತಿಯು ಈ ಕೆಳಕಂಡಂತಿದೆ.<br><br>**1.ವಿಕ್ಟೋರಿಯಾ ಆಸ್ಪತ್ರೆ:** ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಅಧೀನದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಯಾವುದೇ ತಜ್ಞ ವೈದ್ಯರುಗಳ ಕೊರತೆಯಿರುವುದಿಲ್ಲ. ಆಸ್ಪತ್ರೆಗೆ ಬರುವ ರೋಗಿಗಳು ಹಾಗೂ ಇವರ ಪರಿಚಾರಕರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯದ ವ್ಯವಸ್ಥೆ ಮತ್ತು ಸುಗಮ ಸಂಚಾರದ ವ್ಯವಸ್ಥೆಯನ್ನು ಅಗತ್ಯವಾಗಿ ಕಲ್ಪಿಸಲಾಗಿದೆ.<br><br>**2.ಬೌರಿಂಗ್ ಆಸ್ಪತ್ರೆ:** ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಅಧೀನದಲ್ಲಿರುವ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ತಜ್ಞ ವೈದ್ಯರು ಮತ್ತು ಮೂಲ ಸೌಕರ್ಯಗಳು ಲಭ್ಯವಿರುತ್ತವೆ. ಸದರಿ ಆಸ್ಪತ್ರೆಯ ಹೊರರೋಗಿಗಳ ಕಟ್ಟಡ ತುಂಬ ಹಳೆಯದಾಗಿರುವುದರಿಂದ ಈ ಕಟ್ಟಡಗಳನ್ನು ತೆರವುಗೊಳಿಸಿ 500 ಹಾಸಿಗೆ ಸಾಮರ್ಥ್ಯದ ಮಾಡ್ಯೂಲರ್ ಆಸ್ಪತ್ರೆಯನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>**3.ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ:** ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ತಜ್ಞ ವೈದ್ಯರು ಮತ್ತು ಮೂಲ ಸೌಕರ್ಯಗಳು ಲಭ್ಯವಿರುತ್ತವೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಸ್ಪತ್ರೆಗಳು<br><br>**ಕೆ.ಸಿ. ಜನರಲ್ ಆಸ್ಪತ್ರೆ:** ಕೆ ಸಿ ಜನರಲ್ ಆಸ್ಪತ್ರೆಯು ಸುಮಾರು 75 ವರ್ಷಗಳ ಹಿಂದೆ ನಿರ್ಮಿಸಲ್ಪಟ್ಟಿದ್ದು, ಮುಖ್ಯವಾಗಿ ಆಸ್ಪತ್ರೆಯ ಮೇಲ್ಛಾವಣಿ ಸೋರುವಿಕೆ, ಕಿಟಕಿ ಬಾಗಿಲುಗಳು ದುರಸ್ತಿಗೊಳಪಟ್ಟಿರುವುದು, ಶೌಚಾಲಯಗಳಲ್ಲಿ ನೀರಿನ ವ್ಯವಸ್ಥೆ ಮತ್ತು ನೈರ್ಮಲ್ಯೀಕರಣದ ವ್ಯವಸ್ಥೆಯ ದುರಸ್ತಿ ಮತ್ತು ವಿದ್ಯುತ್ ಜಾಲದ ವ್ಯವಸ್ಥೆಯಲ್ಲಿ ಹದಗೆಟ್ಟಿರುತ್ತದೆ ಹಾಗೂ ಹೊಸದಾಗಿ ಶವಾಗಾರ ಕೊಠಡಿಯನ್ನು ನಿರ್ಮಿಸಬೇಕಾಗಿರುತ್ತದೆ. ಈ ದುರಸ್ತಿ ಕಾಮಗಾರಿಗಳು ಹಾಗೂ ಆಸ್ಪತ್ರೆಯ ವೈದ್ಯರುಗಳ ಸಲಹೆಯ ಮೇರೆಗೆ ಕೆಲವೊಂದು ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲು ರೂ.998.00ಲಕ್ಷಗಳ ಅಂದಾಜು ಪಟ್ಟಿಯು ಪರಿಶೀಲನೆಯಲ್ಲಿದೆ.<br><br>ಜಯನಗರ ಸಾರ್ವಜನಿಕ ಆಸ್ಪತ್ರೆ ಬೆಂಗಳೂರು ಇಲ್ಲಿನ ಆಸ್ಪತ್ರೆಯ ಮೂಲಭೂತ ಸೌಕರ್ಯ, ದುರಸ್ತಿ ಮತ್ತು ನವೀಕರಣ ಕಾಮಗಾರಿಯನ್ನು ಕೈಗೊಳ್ಳಲು ರೂ.995.00 ಲಕ್ಷಗಳ ಅಂದಾಜು ಪಟ್ಟಿಯು ಪರಿಶೀಲನೆಯಲ್ಲಿದೆ. |
| ಇ | ವಿಕ್ಟೋರಿಯಾ, ಬೋರಿಂಗ್, ಆಸ್ಪತ್ರೆಗಳ ಚಿಕಿತ್ಸೆಗೆ ಬಂದ ರೋಗಿಗಳು, ವೈದ್ಯರಿಲ್ಲದೆ, ಬೆಡ್‌ಗಳಿಲ್ಲದೆ, ಪಾರ್ಕಿಂಗ್ ಪ್ರದೇಶಗಳಲ್ಲಿ ಮಲಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ವೈದ್ಯಕೀಯ ಶಿಕ್ಷಣ ಇಲಾಖೆಯ ಮಾಹಿತಿಯನ್ವಯ **ವಿಕ್ಟೋರಿಯಾ ಆಸ್ಪತ್ರೆ:** ವಿಕ್ಟೋರಿಯಾ ಆಸ್ಪತ್ರೆಗೆ ಬರುವ ರೋಗಿಗಳ ಪರಿಚಾರಕರುಗಳಿಗೆ ತಂಗಲು ಆಸ್ಪತ್ರೆಯ ಆವರಣದಲ್ಲಿ ವಿಶ್ರಾಂತಿಧಾಮದ ವ್ಯವಸ್ಥೆ ಇದ್ದು ಇಲ್ಲಿ ದೂರದ ಊರುಗಳಿಂದ ಚಿಕಿತ್ಸೆಗಾಗಿ ಬರುವ ರೋಗಿಗಳ ಸಂಬಂಧಿಕರುಗಳು ತಂಗುತ್ತಾರೆ ಹಾಗೂ BMCRI ಸಂಸ್ಥೆಯ ಅಧೀನದ ಎಲ್ಲಾ ಆಸ್ಪತ್ರೆಗಳಲ್ಲೂ ರೋಗಿಗಳಿಗೆ ಊಟ ಮಾಡಲು, ದಣಿವಾರಿಸಿಕೊಳ್ಳಲು ಕಾಯುವ ಕೊಠಡಿ ಸೌಲಭ್ಯವು ಲಭ್ಯವಿರುತ್ತದೆ. ಈಗಾಗಲೇ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿಯೇ ವಿಶ್ರಾಂತಿಧಾಮದ ಸೌಲಭ್ಯವಿದ್ದು, ರೋಗಿಗಳ ಪರಿಚಾರಕರುಗಳು ಇದರ ಉಪಯೋಗ ಪಡೆಯುತ್ತಿರುತ್ತಾರೆ.<br><br>**ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ:** ಸದರಿ ಆಸ್ಪತ್ರೆಗೆ ಬರುವ ರೋಗಿಗಳು ಮತ್ತು ಅವರ ಪರಿಚಾರಕರುಗಳು ತಂಗಲು ಸೂಕ್ತ ವ್ಯವಸ್ಥೆ ಇರುತ್ತದೆ. |

| | | |
|---|---|---|
| ಈ | ವಿಕ್ಟೋರಿಯಾ, ಬೋರಿಂಗ್, ಕೆ.ಸಿ.ಜನರಲ್, ರಾಜೀವ್ ಗಾಂಧಿ ಎದೆರೋಗಗಳ ಆಸ್ಪತ್ರೆ, ಕಿದ್ವಾಯಿ ಆಸ್ಪತ್ರೆಗಳಲ್ಲಿರುವ ಖಾಯಂವೈದ್ಯರ ಸಂಖ್ಯೆ ಎಷ್ಟು; ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ಖಾಯಂ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ತಜ್ಞ ವೈದ್ಯರ ಸಂಖ್ಯೆ ಎಷ್ಟು? (ವಿವರ ನೀಡುವುದು) | (see tables below) |

| ಕ್ರ. ಸಂ | ಸಂಸ್ಥೆಯ ಹೆಸರು | ಖಾಯಂ ವೈದ್ಯರ ಸಂಖ್ಯೆ | ಗುತ್ತಿಗೆ ವೈದ್ಯರ ಸಂಖ್ಯೆ | ಖಾಯಂ ತಜ್ಞ ವೈದ್ಯರ ಸಂಖ್ಯೆ | ಗುತ್ತಿಗೆ ತಜ್ಞ ವೈದ್ಯರ ಸಂಖ್ಯೆ |
|---|---|---|---|---|---|
| 1. | ವಿಕ್ಟೋರಿಯಾ | 126 | 30 | 13 | - |
| 2. | ಬೌರಿಂಗ್ | 15 | - | 12 | - |
| 3. | ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆ | 15 | 04 | 21 | |
| 4. | ಕಿದ್ವಾಯಿ ಆಸ್ಪತ್ರೆ | 113 | 13 | - | 05 |

| ಆಸ್ಪತ್ರೆಯ ಹೆಸರು | ಖಾಯಂ ತಜ್ಞ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ. | ಎನ್. ಹೆಚ್. ಎಂ., ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ವೈದ್ಯರ ಸಂಖ್ಯೆ. |
|---|---|---|
| ಕೆ.ಸಿ.ಜನರಲ್ ಆಸ್ಪತ್ರೆ, | 52 | 13 |
| ಜಯನಗರ ಜನರಲ್ ಆಸ್ಪತ್ರೆ | 53 | 8 |

**ಆಕುಕ 29 ಎಚ್‌ಎಸ್‌ಡಿ 2023**

( ದಿನೇಶ್ ಗುಂಡೂರಾವ್)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು